ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 6/9/2018

# ಯತ್ನಾಳ್ ಎಂಎಲ್ಸಿ ಸೀಟಿಗೆ ಇಂದು ಉಪಚುನಾವಣೆ

ಕ.ಪ್ರ. 6-9-18

ವಿಜಯಪುರ: ಬಾಗಲಕೋಟೆ ಹಾಗೂ ವಿಜಯಪುರ ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್‌ಗೆ ನಡೆಯಲಿರುವ ಉಪಚುನಾವಣೆಗೆ ಸೆ.6ರಂದು ಮತದಾನ ನಡೆಯಲಿದೆ. ಈ ಕ್ಷೇತ್ರದಿಂದ ಪಕ್ಷೇತರರಾಗಿ ಆಯ್ಕೆಯಾಗಿದ್ದ ಬಸನಗೌಡ ಪಾಟೀಲ ಯತ್ನಾಳ ಅವರು ಇತ್ತೀಚೆಗೆ ನಡೆದ ವಿಧಾನಸಭೆ ಚುನಾವಣೆಯಲ್ಲಿ ವಿಜಯಪುರ ನಗರ ಕ್ಷೇತ್ರದಿಂದ ಆಯ್ಕೆಯಾಗಿದ್ದರು. ಈ ಹಿನ್ನೆಲೆಯಲ್ಲಿ ಅವರಿಂದ ತೆರವಾಗಿರುವ ಈ ಕ್ಷೇತ್ರಕ್ಕೆ ಸೆ.6ರಂದು ಮತದಾನ ನಡೆಯಲಿದ್ದು, ಬುಧವಾರ ಅಧಿಕಾರಿಗಳು ಹಾಗೂ ಸಿಬ್ಬಂದಿ ಮಸ್ಟರಿಂಗ್ ಕಾರ್ಯ ಪೂರ್ಣಗೊಳಿಸಿ ಮತಗಟ್ಟೆಗಳಿಗೆ ತೆರಳಿದರು. ಕಾಂಗ್ರೆಸ್ ಪಕ್ಷದಿಂದ ಮಾಜಿ ಸಚಿವ, ಶಾಸಕ ಎಂ.ಬಿ.ಪಾಟೀಲ್ ಅವರ ಸಹೋದರ ಸುನೀಲಗೌಡ ಹಾಗೂ ಬಿಜೆಪಿಯಿಂದ ಗೂಳಪ್ಪ ಸಿದ್ದಪ್ಪ ಶಟಗಾರ ಅವರು ಸ್ಪರ್ಧಾ ಕಣದಲ್ಲಿದ್ದಾರೆ. ಸೆ.11ರಂದು ಫಲಿತಾಂಶ ಪ್ರಕಟವಾಗಲಿದೆ.